# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 172 |
| ಉತ್ತರಿಸಬೇಕಾದ ದಿನಾಂಕ | : | 10-12-2024 |
| ಉತ್ತರಿಸಬೇಕಾದ ಸಚಿವರು | : | ಸಹಕಾರ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಬೇಕೆಂದು ಜಿಲ್ಲೆಯ ಜನರ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಬೇಕೆಂದು ಜಿಲ್ಲೆಯ ಜನರು ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ; | 1. ರಾಜ್ಯ ಸರ್ಕಾರವು 2022-23 ನೇ ಸಾಲಿನ ಆಯವ್ಯಯದಲ್ಲಿ ಹಾಸನ ಸಹಕಾರಿ ಹಾಲು ಒಕ್ಕೂಟದ ವ್ಯಾಪ್ತಿಯ ಚಿಕ್ಕಮಗಳೂರು ಜಿಲ್ಲೆಯನ್ನು ಬೇರ್ಪಡಿಸಿ ಹೊಸದಾಗಿ ಜಿಲ್ಲಾ ಹಾಲು ಒಕ್ಕೂಟದ ಸ್ಥಾಪನೆ ಮಾಡಲು ಘೋಷಣೆ ಮಾಡಲಾಗಿರುತ್ತದೆ.<br><br>2. ಹಾಸನ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ಹಾಸನ ಈ ಸಂಸ್ಥೆಯಿಂದ ಚಿಕ್ಕಮಗಳೂರು ಜಿಲ್ಲೆಯನ್ನು ವಿಭಜಿಸಿ ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರತ್ಯೇಕ ಹಾಲು ಒಕ್ಕೂಟವನ್ನು ರಚಿಸುವ ಸಂಬಂಧ ದಿನಾಂಕ 30.8.2019 ರಂದು ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯಲ್ಲಿ ಕರ್ನಾಟಕ ಹಾಲು ಮಹಾಮಂಡಳದಿಂದ ತಾಂತ್ರಿಕ ಸಾಧ್ಯತಾ ವರದಿ ತಯಾರಿಸಲು ಹಾಗೂ ಸೂಕ್ತ ಜಾಗವನ್ನು ಗುರುತಿಸಿ ಮಂಜೂರು ಮಾಡಲು ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಲಾಗಿರುತ್ತದೆ. ಆದರೆ ಸದರಿ ಡೈರಿ ನಿರ್ಮಾಣಕ್ಕಾಗಿ ಈವರೆಗೂ ಸೂಕ್ತ ಸ್ಥಳ ಮಂಜೂರು ಆಗಿರುವುದಿಲ್ಲ.<br><br>3. ಹಾಸನ ಹಾಲು ಒಕ್ಕೂಟದಲ್ಲಿ ಮೆಗಾ ಡೈರಿ ಸ್ಥಾಪಿಸುವ ಸಂಬಂಧ ರೂ.810 ಕೋಟಿಗಳ ಯೋಜನೆಯನ್ನು ಸಿದ್ದಪಡಿಸಿ National Dairy Development Board (ಎನ್.ಡಿ.ಡಿ.ಬಿ) ಸಂಸ್ಥೆಯಿಂದ ಅನುಮೋದನೆಯನ್ನು ಪಡೆಯಲಾಗಿದ್ದು ಈ |
| ಇ) | ಚಿಕ್ಕಮಗಳೂರಿಗೆ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಲು ಇರುವ ತೊಡಕುಗಳೇನು; ಯಾವಾಗ ಪ್ರತ್ಯೇಕ ಹಾಲು ಒಕ್ಕೂಟ ಸ್ಥಾಪಿಸಲಾಗುವುದು; ಈ ನಿಟ್ಟಿನಲ್ಲಿ ಸರ್ಕಾರದಿಂದ ಅಗಿರುವ ಪ್ರಗತಿ ಏನು ? | |

| | | |
|---|---|---|
| | | ಸಂಬಂಧ ಈಗಾಗಲೇ ಡಿ.ಐ.ಡಿ.ಎಫ್ ಯೋಜನೆಯಡಿಯಲ್ಲಿ ರೂ.350 ಕೋಟಿಗಳ ಸಾಲವನ್ನು ಮಂಜೂರು ಮಾಡಿರುವುದರಿಂದ ಸದರಿ ಒಕ್ಕೂಟದಿಂದ ಚಿಕ್ಕಮಗಳೂರು ಜಿಲ್ಲೆಯನ್ನು ಬೇರ್ಪಡಿಸಿ ಪ್ರತ್ಯೇಕ ಒಕ್ಕೂಟ ರಚನೆಯ ಸಂಬಂಧ ಎನ್.ಡಿ.ಡಿ.ಬಿ ಸಂಸ್ಥೆಯಿಂದ ನಿರಾಕ್ಷೇಪಣಾ ಪತ್ರ (N.O.C) ಪಡೆಯುವುದು ಅವಶ್ಯವೆಂದು ಸಭೆಯಲ್ಲಿ ಹಾಜರಿದ್ದ ಎನ್.ಡಿ.ಡಿ.ಬಿ ಸಂಸ್ಥೆಯ ಪ್ರತಿನಿಧಿಯವರು ತಿಳಿಸಿದ್ದು, ಈ ಸಂಬಂಧ ಎನ್.ಡಿ.ಡಿ.ಬಿ ಸಂಸ್ಥೆಯೊಂದಿಗೆ ನಿರಾಕ್ಷೇಪಣಾ ಪತ್ರ (N.O.C) ಕೋರಿ ಪತ್ರ ವ್ಯವಹಾರ ನಡೆಸಲಾಗಿದ್ದು, ಈವರೆಗೂ ನಿರಾಕ್ಷೇಪಣಾ ಪತ್ರ (N.O.C) ಸ್ವೀಕೃತವಾಗದ ಕಾರಣ ಹಾಸನ ಹಾಲು ಒಕ್ಕೂಟದಿಂದ ಚಿಕ್ಕಮಗಳೂರು ಜಿಲ್ಲೆಯನ್ನು ವಿಭಜಿಸಲು ಸಾಧ್ಯವಾಗಿರುವುದಿಲ್ಲ. ನಿರಾಕ್ಷೇಪಣಾ ಪತ್ರ (N.O.C) ಸ್ವೀಕೃತಗೊಂಡ ಕೂಡಲೇ ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರತ್ಯೇಕ ಹಾಲು ಒಕ್ಕೂಟದ ರಚನೆಗೆ ನಿಯಮಾನುಸಾರ ಕ್ರಮವಿಡಲಾಗುವುದು.<br><br>4. ಮುಂದುವರೆದು, ಹಾಸನ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟದ ವ್ಯಾಪ್ತಿಯಿಂದ ಚಿಕ್ಕಮಗಳೂರು ಜಿಲ್ಲೆ ಮತ್ತು ಹಾಸನ ಜಿಲ್ಲೆಯ ಅರಸೀಕೆರೆ ತಾಲ್ಲೂಕಿನ ಕಾರ್ಯವ್ಯಾಪ್ತಿಯನ್ನೊಳಗೊಂಡಂತೆ ಪ್ರತ್ಯೇಕವಾದ ಚಿಕ್ಕಮಗಳೂರು ಹಾಲು ಒಕ್ಕೂಟವನ್ನು ಸ್ಥಾಪಿಸುವ ಬಗ್ಗೆ ಸಾಧ್ಯತಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲು ದಿನಾಂಕ 04.11.2024 ರಂದು ಕರ್ನಾಟಕ ಹಾಲು ಮಹಾಮಂಡಳಕ್ಕೆ ಸೂಚಿಸಲಾಗಿರುತ್ತದೆ. |

**ಸಂಖ್ಯೆ: ಸಿಒ 155 ಸಿಸಿಬಿ 2024**

K. N. Rajanna

**(ಕೆ.ಎನ್. ರಾಜಣ್ಣ)**
**ಸಹಕಾರ ಸಚಿವರು**